# ಕರ್ನಾಟಕ ಸರ್ಕಾರ

ಸಂಖ್ಯೆ:ಸಕನಿ/ಸಿಬ್ಬಂದಿ-11/ಸಿಆರ್-66 /2022-23

ಸಮಾಜ ಕಲ್ಯಾಣ ಆಯುಕ್ತರ ಕಛೇರಿ,
5 ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:09 1 -2023.

## ಅಧಿಕೃತ ಜ್ಞಾಪನ

ವಿಷಯ: ಸಮಾಜ ಕಲ್ಯಾಣ ಇಲಾಖೆಯಲ್ಲಿ ಎಸ್.ಎಸ್.ಎಲ್.ಸಿ/ಪಿಯುಸಿ ವಿದ್ಯಾರ್ಹತೆಯೊಂದಿಗೆ ಕನ್ನಡ & ಇಂಗ್ಲೀಷ್ ಹಿರಿಯ ಬೆರಳಚ್ಚು ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಗ್ರೂಪ್ ಡಿ ವೃಂದದ (ಅಡುಗೆಯವರು, ಅಡುಗೆ ಸಹಾಯಕರು, ಜವಾನರು, ಕಾವಲುಗಾರರು) ನೌಕರರ ಸಂಯೋಜಿತ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ: 31-12-2022 ಕ್ಕೆ ಅಂತ್ಯಗೊಂಡಂತೆ ದಿನಾಂಕ: 01-01-2023 ರಲ್ಲಿದ್ದಂತೆ ಪ್ರಕಟಿಸುವ ಕುರಿತು.

ಉಲ್ಲೇಖ
1. ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ) ನಿಯಮಗಳು, 1957.
2. ಸರ್ಕಾರದ ಅಧಿಕೃತ ಜ್ಞಾಪನ ಸಂ: ಡಿಪಿಎಆರ್ 48 ಎಸ್ ಎಸ್ಆರ್ 75 ದಿ: 05-07-1976.
3. ಸರ್ಕಾರದ ಅಧಿಕೃತ ಜ್ಞಾಪನ ಸಂ:ಸಿಆಸುಇ 43 ಸೇನೆನಿ 87 ದಿನಾಂಕ: 14-12-1987.
4. ಸರ್ಕಾರದ ಅಧಿಕೃತ ಜ್ಞಾಪನ ಸಂ:ಸಿಆಸುಇ 07 ಸೇನೆನಿ 96 ದಿನಾಂಕ: 16-07-1996
5. ಸರ್ಕಾರದ ಅಧಿಕೃತ ಜ್ಞಾಪನ ಸಂ:ಸಿಆಸುಇ 32 ಸೇನೆನಿ 2003 ದಿನಾಂಕ: 10-06-2003.
6. ಸರ್ಕಾರದ ಸುತ್ತೋಲೆ ಸಂ:ಸಿಆಸುಇ 3 ಎಸ್ಆರ್ಎಸ್ 2019 ದಿನಾಂಕ::04-06-2019.
7. ಸರ್ಕಾರದ ಅಧಿಕೃತ ಜ್ಞಾಪನ ಸಂ: ಸಿಆಸುಇ 106 ಸೇನೆನಿ 2021 ದಿನಾಂಕ: 10-12-2021.

*****

ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ) ನಿಯಮಗಳು, 1957 ರ ನಿಯಮ 10 ರಡಿ ಜೇಷ್ಠತಾ ನಿಯಮಗಳನ್ನು ಅನುಸರಿಸಿ ಪ್ರತಿಯೊಂದಿ ವೃಂದದ ಜೇಷ್ಠತಾ ಪಟ್ಟಿಯನ್ನು ಪ್ರತಿ ವರ್ಷ ನೇಮಕಾತಿ ಪ್ರಾಧಿಕಾರವು ಸಿದ್ಧಪಡಿಸಬೇಕಾಗಿರುತ್ತದೆ.

ಉಲ್ಲೇಖ (7) ರ ಅಧಿಕೃತ ಜ್ಞಾಪನದಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಅನುಪಾತದನ್ವಯ (**Quota**) ನೇರ ನೇಮಕಾತಿ ಮತ್ತು ಮುಂಬಡ್ತಿಗಾಗಿ ರಿಕ್ತಸ್ಥಾನ ಆಧಾರಿತ ವರ್ಗೀಕರಣ ಮಾಡುವ ಪದ್ಧತಿಯನ್ನು ರದ್ದುಪಡಿಸಿ, ಹುದ್ದೆ ಆಧಾರಿತ ವರ್ಗೀಕರಣ ಅನುಸರಿಸಿ ಭವಿಷ್ಯವರ್ತಿಯಾಗಿ ಭರ್ತಿ ಮಾಡಲು ಹಿಂದಿನ ಮಾರ್ಗಸೂಚಿಯನ್ನು ಮಾರ್ಪಡಿಸಿ, ಪರಿಷ್ಕೃತ ಮಾರ್ಗಸೂಚನೆಗಳನ್ನು ನೀಡಲಾಗಿರುತ್ತದೆ ಹಾಗೂ ಜೇಷ್ಠತಾ ಪಟ್ಟಿ ಸಿದ್ಧಪಡಿಸಲು ಈ ಹಿಂದಿನ ಉಲ್ಲೇಖ (4) ರಿಂದ (6) ರವರೆಗಿನ ಅಧಿಕೃತ ಜ್ಞಾಪನದಲ್ಲಿ ನಿಗದಿಪಡಿಸಲಾದ ನಮೂನೆಗಳನ್ನು ಮಾರ್ಪಡಿಸಿದೆ.

ಉಲ್ಲೇಖ (7) ರ ಸರ್ಕಾರದ ಅಧಿಕೃತ ಜ್ಞಾಪನ ಅನುಬಂಧ-1 ರಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಎರಡು ವಿಧಾನಗಳಿಂದಲೂ ನೇಮಕಾತಿ ಮಾಡುವುದಕ್ಕೆ ಸಂಬಂಧಿಸಿದಂತೆ

ನಮೂನೆಯನ್ನು ಮತ್ತು ಅನುಬಂಧ-2 ರಲ್ಲಿ ನೇರ ನೇಮಕಾತಿ ಅಥವಾ ಮುಂಬಡ್ತಿ ಒಂದೇ ವಿಧಾನದ ಮೂಲಕ ಭರ್ತಿ ಮಾಡುವ ಹುದ್ದೆಗಳಿಗೆ ಸಂಬಂಧಿಸಿದಂತೆ ಜೇಷ್ಠತಾ ಪಟ್ಟಿಯನ್ನು ಸಿದ್ದಪಡಿಸಲು ನಮೂನೆಯನ್ನು ನಿಗದಿಪಡಿಸಲಾಗಿದೆ.

ಅದರಂತೆ ಪ್ರಸ್ತುತ ಸಮಾಜ ಕಲ್ಯಾಣ ಇಲಾಖೆಯಲ್ಲಿ ಎಸ್.ಎಸ್.ಎಲ್.ಸಿ/ತತ್ಸಮಾನ ವಿದ್ಯಾರ್ಹತೆಯೊಂದಿಗೆ ಕನ್ನಡ & ಇಂಗ್ಲೀಷ್ ಹಿರಿಯ ಬೆರಳಚ್ಚು ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಗ್ರೂಪ್ ಡಿ ವೃಂದದ (ಅಡುಗೆಯವರು, ಅಡುಗೆ ಸಹಾಯಕರು, ಜವಾನರು, ಕಾವಲುಗಾರರು) ನೌಕರರಿಗೆ ಸಂಬಂಧಿಸಿದಂತೆ ಹೈದರಾಬಾದ್-ಕರ್ನಾಟಕ ಸ್ಥಳೀಯ ವೃಂದ ಮತ್ತು ಉಳಿಕೆ ಮೂಲ ವೃಂದದ ಸಂಯೋಜಿತ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಅನುಬಂಧ-2 ರಲ್ಲಿ ದಿನಾಂಕ:31-12-2022 ಕ್ಕೆ ಅಂತ್ಯಗೊಂಡಂತೆ ದಿನಾಂಕ:01-01-2023 ರಲ್ಲಿದ್ದಂತೆ ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ **sw.kar.nic.in** ನಲ್ಲಿ ಪ್ರಕಟಿಸಿ, ಆಕ್ಷೇಪಣೆಗಳನ್ನು ಸಲ್ಲಿಸಲು ದಿನಾಂಕ:-02-02-2023 ರವರೆಗೆ ಕಾಲಾವಕಾಶ ನೀಡಲಾಗಿದೆ.

ಜೇಷ್ಠತಾ ಪಟ್ಟಿಯಿಂದ ಬಾಧಿತರಾಗಿರುವ ನೌಕರರು ಸದರಿ ತಾತ್ಕಾಲಿಕ ಜೇಷ್ಠತಾ ಪಟ್ಟಿಯಲ್ಲಿನ ನೌಕರರ ಹೆಸರು, ನೇಮಕಾತಿ ವಿಧಾನ, ಮೀಸಲಾತಿ ವರ್ಗ, ಜನ್ಮ ದಿನಾಂಕ, ಸೇವೆಗೆ ಸೇರಿದ ದಿನಾಂಕ, ಜೇಷ್ಠತೆಗೆ ಪರಿಗಣಿಸಲಾದ ಅರ್ಹತೆ ದಿನಾಂಕ, ಜೇಷ್ಠತೆ ನಿಗದಿಪಡಿಸಿರುವಲ್ಲಿ ವ್ಯತ್ಯಾಸ / ಹೆಸರು ಕೈಬಿಟ್ಟುಹೋಗಿರುವ, ಮುಂಬಡ್ತಿ ಹೊಂದಿರುವ ಕುರಿತು ಲೋಪದೋಷಗಳಿದ್ದಲ್ಲಿ ಸಂಬಂಧಪಟ್ಟ ನೌಕರರು ಆಕ್ಷೇಪಣೆಯನ್ನು ಲಿಖಿತವಾಗಿ ತಮ್ಮ ಕಛೇರಿ ಮುಖ್ಯಸ್ಥರಿಗೆ ಸಲ್ಲಿಸತಕ್ಕದ್ದು. ಸದರಿ ಆಕ್ಷೇಪಣೆಗಳನ್ನು ದೃಢೀಕೃತ ದಾಖಲೆಗಳೊಂದಿಗೆ ಈ ಕಛೇರಿಗೆ ನೊಂದಣಿ ಅಂಚೆ ಮೂಲಕ ಸಂಬಂಧಪಟ್ಟ ಕಛೇರಿ ಮುಖ್ಯಸ್ಥರು ಸಲ್ಲಿಸತಕ್ಕದು. ನಿಗದಿತ ಅವಧಿ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ತಿರಿಸ್ಕರಿಸಲಾಗುವುದು.

09/01/23

ಆಯುಕ್ತರು,
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

**ಪ್ರತಿಯನ್ನು:-**

1. ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
3. ಕಾರ್ಯದರ್ಶಿಗಳು, ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ, ಬೆಂಗಳೂರು.
4. ಮುಖ್ಯ ಆಡಳಿತಾಧಿಕಾರಿಗಳು, ಪರೀಕ್ಷಾ ಪೂರ್ವ ತರಬೇತಿ ಕೇಂದ್ರ, ಬೆಂಗಳೂರು .
5. ಎಲ್ಲಾ ಜಿಲ್ಲಾಗಳ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ.
6. ಎಲ್ಲಾ ಜಿಲ್ಲೆಗಳ ಜಂಟಿ ನಿರ್ದೇಶಕರು / ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
7. ಎಲ್ಲಾ ಯೋಜನಾ ಸಮನ್ವಯಾಧಿಕಾರಿಗಳು, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ.
8. ಎಲ್ಲಾ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ.
9. ಎಲ್ಲಾ ತಾಲ್ಲೂಕುಗಳ ಸಹಾಯಕ ನಿರ್ದೇಶಕರು ಗ್ರೇಡ್-1 ಮತ್ತು ಗ್ರೇಡ್-2 ಸಮಾಜ ಕಲ್ಯಾಣ ಇಲಾಖೆ.
10. ಸಂಬಂಧಿಸಿದ ನೌಕರರಿಗೆ ಸಂಬಂಧಿಸಿದ ಮೇಲಾಧಿಕಾರಿಗಳ ಮುಖಾಂತರ.

## ಅನುಬಂಧ-2

### ನೇರ ನೇಮಕಾತಿ ಅಥವಾ ಮುಂಬಡ್ತಿ ಮುಖಾಂತರ ಒಂದೇ ವಿಧಾನದಿಂದ ನೇಮಕಾತಿ ಮಾಡುವ ವೃಂದಗಳಿಗೆ

ದಿನಾಂಕ:01-01-2023 ರಲ್ಲಿದ್ದಂತೆ ಸಮಾಜ ಕಲ್ಯಾಣ ಇಲಾಖೆಯ ಗ್ರೂಪ್-ಡಿ ವೃಂದದ ಹಿರಿಯ ವೇತನ ಶ್ರೇಣಿ (18,600-32,600) (ಅಡುಗೆಯವರು) ಹಾಗೂ ಕಿರಿಯ ವೇತನ ಶ್ರೇಣಿ (17,000-28,950) (ಅಡುಗೆ ಸಹಾಯಕರು, ಕಾವಲುಗಾರರು ಮತ್ತು ಜವಾನರು) ಹುದ್ದೆಯಲ್ಲಿ ಎಸ್.ಎಸ್.ಎಲ್.ಸಿ/ಪಿಯುಸಿ ಕನ್ನಡ ಮತ್ತು ಇಂಗ್ಲೀಷ್ ಹಿರಿಯ ಬೆರಳಚ್ಚು ಪರೀಕ್ಷೆಯಲ್ಲಿ ಉತ್ತೀರ್ಣರಾದ ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವೃಂದ ಹಾಗೂ ಉಳಿಕೆ ಮೂಲ ವೃಂದದ ನೌಕರರ ಸಂಯೋಜಿತ (Combined) ತಾತ್ಕಾಲಿಕ ಜೇಷ್ಠತಾ ಪಟ್ಟಿ

1) ಇಲಾಖೆ: ಸಮಾಜ ಕಲ್ಯಾಣ ಇಲಾಖೆ

2) ವೃಂದದ ಹೆಸರು: ಹಿರಿಯ ವೇತನಶ್ರೇಣಿ (ಅಡುಗೆಯವರು), ಕಿರಿಯ ವೇತನಶ್ರೇಣಿ (ಅಡುಗೆ ಸಹಾಯಕರು, ಕಾವಲುಗಾರರು ಮತ್ತು ಜವಾನರು)

3) ವೃಂದದಲ್ಲಿನ ಒಟ್ಟು ಹುದ್ದೆಗಳ ಸಂಖ್ಯೆ (ಶಾಶ್ವತ ಮತ್ತು ತಾತ್ಕಾಲಿಕ ಹುದ್ದೆಗಳೆರಡೂ ಒಳಗೊಂಡಂತೆ: 02 + 10 =12

4) ನೇಮಕಾತಿ ನಿಯಮಗಳ ಅನುಸಾರ ನೇಮಕಾತಿ ವಿಧಾನ: ಮುಂಬಡ್ತಿ-ಅಡುಗೆಯವರು, ನೇರ ನೇಮಕಾತಿ-ಅಡುಗೆ ಸಹಾಯಕರು, ಕಾವಲುಗಾರರು ಮತ್ತು ಜವಾನರು

### ಹಿರಿಯ ವೇತನಶ್ರೇಣಿ (18,600-32,600) (ಅಡುಗೆಯವರು) ತಾತ್ಕಾಲಿಕ ಸಂಯೋಜಿತ ಜೇಷ್ಠತಾ ಪಟ್ಟಿ (ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವೃಂದ)

ಸಂಖ್ಯೆ:ಸಕನಿ/ಸಿಬ್ಬಂದಿ-11/ಸಿಆರ್-66/2022-23, ದಿನಾಂಕ: / /2023

| ಕ್ರ.ಸಂ | ನೌಕರರ ಹೆಸರು ಶ್ರೀ/ಶ್ರೀಮತಿ | ಹುದ್ದೆಯ ಹೆಸರು | ನೌಕರರು ಕಾರ್ಯನಿರ್ವಹಿಸುತ್ತಿರುವ ಸ್ಥಳ (ಲಭ್ಯವಿರುವ ಮಾಹಿತಿಯನ್ವಯ) | ಮೀಸಲಾತಿ ವರ್ಗ | ನೇರ ನೇಮಕಾತಿ/ ಮುಂಬಡ್ತಿ | | ಜನ್ಮ ದಿನಾಂಕ (ಎಸ್.ಎಸ್.ಎಲ್.ಸಿ ಅಂಕಪಟ್ಟಿಯಲ್ಲಿ ರುವಂತೆ) | ನೇಮಕಾತಿ ಆದೇಶ / ಸೇವೆಗೆ ಸೇರಿದ ದಿನಾಂಕ: | ವಾಸ್ತವವಾಗಿ ನೇರ ನೇಮಕಾತಿ/ ಮುಂಬಡ್ತಿ ಹೊಂದಿದ ದಿನಾಂಕ | ಜೇಷ್ಠತೆಗೆ ಅರ್ಹತಾ ದಿನಾಂಕ | ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ವರ್ಷ, ನೈಜತಾ ವರದಿ | ಕನ್ನಡ ಮತ್ತು ಇಂಗ್ಲೀಷ್ ಹಿರಿಯ ಬೆರಳಚ್ಚು ಉತ್ತೀರ್ಣ |
|---|---|---|---|---|---|---|---|---|---|---|---|---|
| | | | | | ನೇರ ನೇಮಕಾತಿ | ಮುಂಬಡ್ತಿ | | | | | | |
| 1 | 2 | 3 | 4 | 5 | 6 | | 7 | 8 | 9 | 10 | | 11 |
| 1 | ನಾಗರಾಜ ತಂದೆ ಕಾಶಪ್ಪ | ಅಡುಗೆಯವರು | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಗುಂಡಗುರ್ತಿ, ಚಿತ್ತಾಪೂರ ತಾಲ್ಲೂಕು, ಕಲಬುರಗಿ ಜಿಲ್ಲೆ. | 2(ಎ) | | ಮುಂಬಡ್ತಿ | 08-06-1993 | 12-03-2018 | 16-08-2021 | 16-08-2021 | ಮಾರ್ಚ್-2009 Authentic | 2015330351 ಜನವರಿ-2015 2015334173 ಜನವರಿ-2015 |